# ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಒಂದು ಉದ್ದಿಮೆ)

**1ನೇ ಮಹಡಿ, "ವನವಿಕಾಸ" 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003**

## 23 ಸಹಾಯಕ ನೆಡುತೋಪು ಅಧೀಕ್ಷಕ ಹಾಗೂ 22 ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ 2016–17

**ಅಧಿಸೂಚನೆ ಸಂಖ್ಯೆ: ಕಅಅನಿನಿ/ಎ1/ನೇನ/2016–17/236 ದಿನಾಂಕ: 03.05.2016 ಹಾಗೂ**
**ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಕಅಅನಿನಿ/ಎ1(ಬಿ)/ನೇನ/2017–18/2006 ದಿನಾಂಕ: 15.12.2017**

### ಪ್ರಕಟಣೆ

ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದಲ್ಲಿನ 23 ಸಹಾಯಕ ನೆಡುತೋಪು ಅಧೀಕ್ಷಕ ಮತ್ತು 22 ಅರಣ್ಯ ರಕ್ಷಕ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ, ದಿನಾಂಕ: 19.11.2021 ರಂದು ಪ್ರಕಟಿಸಲಾದ ಪ್ರಕಟಣೆಯಲ್ಲಿ ಬಿ.ಎಸ್ಸಿ. (ಅರಣ್ಯ ಶಾಸ್ತ್ರ) ಕೋಟಾದಡಿ 4 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ಬಿ.ಎಸ್ಸಿ. (ಇತರೆ) ಕೊಟಾದಡಿ 11 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಮತ್ತು 6 ಅಭ್ಯರ್ಥಿಗಳ ತಾತ್ಕಾಲಿಕ ಕಾಯುವಿಕೆ ಪಟ್ಟಿ ಹಾಗೂ 22 ಅರಣ್ಯ ರಕ್ಷಕರ ಹುದ್ದೆಗಳಿಗೆ 16 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆಯನ್ನು ಈ ಕೆಳಕಂಡ ದಿನಾಂಕ ಮತ್ತು ಸ್ಥಳದಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ವಿವರ ಈ ಕೆಳಕಂಡಂತಿದೆ.

| ದಿನಾಂಕ ಮತ್ತು ಸಮಯ | ಪರೀಕ್ಷೆ | ಪರೀಕ್ಷೆ ನಡೆಯುವ ಸ್ಥಳ |
|---|---|---|
| 14.12.2021<br>ಬೆಳಿಗ್ಗೆ 11.00 ಗಂಟೆಗೆ | ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆ | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ರವರ ಕಛೇರಿ, 9ನೇ ಮಹಡಿ, ಅರಣ್ಯ ಭವನ, ಮಲ್ಲೇಶ್ವರಂ 18ನೇ ಮುಖ್ಯ ರಸ್ತೆ,<br>ಬೆಂಗಳೂರು – 560 003 |

**ವಿಶೇಷ ಸೂಚನೆ:**

1. ದಿನಾಂಕ: 14.12.2021 ರಂದು ನಡೆಯುವ ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆಗೆ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಮಯದಲ್ಲಿ ನಮೂದಿಸಿರುವ ಶೈಕ್ಷಣಿಕ ಅರ್ಹತೆ ದಾಖಲೆ ಹಾಗೂ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳ ಮೂಲ ದಾಖಲೆಗಳು ಹಾಗೂ ಸದರಿ ದಾಖಲೆಗಳ ಜೆರಾಕ್ಸ್ ಪ್ರತಿಯನ್ನು ಗೆಜೆಟೆಡ್ ಅಧಿಕಾರಿಯವರಿಂದ ದೃಢೀಕರಿಸಿದ ಪ್ರತಿಯನ್ನು ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.
2. ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು ಹಾಜರುಪಡಿಸಲು ಯಾವುದೇ ಕಾರಣಕ್ಕೂ ಮತ್ತು ಯಾವುದೇ ಸನ್ನಿವೇಶದಲ್ಲಿಯೂ ಕಾಲ ವಿಸ್ತರಣೆ ನೀಡಲಾಗುವುದಿಲ್ಲ.
3. ಅಭ್ಯರ್ಥಿಯು ತನ್ನ ಅರ್ಜಿ ನಮೂನೆಯಲ್ಲಿ ನಮೂದಿಸಿರುವ ಮಾಹಿತಿ / ವಿವರಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು. ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
4. ಅಭ್ಯರ್ಥಿಯು ಸರ್ಕಾರವು ನಿಗಧಿಪಡಿಸಿದ ಯಾವುದಾದರೂ ಮೂಲ ಗುರುತಿನ ಚೀಟಿ (ಚುನಾವಣಾ ಫೋಟೋ ಗುರುತಿನ ಚೀಟಿ / ಆಧಾರ್ ಕಾರ್ಡ್ / ಪಾಸ್‌ಪೋರ್ಟ್ / ಚಾಲನಾ ಪರವಾನಗಿ ಪ್ಯಾನ್ ಕಾರ್ಡ್) ಕಡ್ಡಾಯವಾಗಿ ತರತಕ್ಕದ್ದು ಹಾಗೂ ಅದರ ಜೆರಾಕ್ಸ್ ಪ್ರತಿಯೊಂದಿಗೆ ಮೇಲೆ ತಿಳಿಸಿರುವ ಮೂಲ ದಾಖಲೆಗಳ ಪರಿಶೀಲನೆ ನಡೆಯುವ ಸ್ಥಳಕ್ಕೆ ನಿಗಧಿತ ಸಮಯದೊಳಗೆ ಹಾಜರಾಗಲು ತಿಳಿಸಿದೆ.
5. ಅಭ್ಯರ್ಥಿಗಳು ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು. ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಭತ್ಯೆಗಳನ್ನು ನೀಡಲಾಗುವುದಿಲ್ಲ.

ದಿನಾಂಕ: 03–12–2021
ಸ್ಥಳ: ಬೆಂಗಳೂರು

ವ್ಯವಸ್ಥಾಪಕ ನಿರ್ದೇಶಕರು